ಅನುಬಂಧ ನಿ-72 (37)

# ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಹರೀಶ್ ಕುಮಾರ್, ಇವರ ನಿಯಮ 72 ರಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಸರ್ಕಾರದ ಉತ್ತರ

ವಿಷಯ: "ಮಲನಾಡು ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ನಾಮನಿರ್ದೇಶನಗೊಳ್ಳಲು ಸದರಿ ಮಂಡಳಿ ವ್ಯಾಪ್ತಿಯಲ್ಲಿ ಆಯ್ಕೆಯಾಗಿರುವ ವಿಧಾನ ಪರಿಷತ್ತಿನ ಸದಸ್ಯರುಗಳು ಅಧಿಕಾರ ವ್ಯಾಪ್ತಿ ಹೊಂದಿದ್ದು, ಇತ್ತೀಚಿನ ವರ್ಷಗಳಲ್ಲಿ ಪರಿಷತ್ ಸದಸ್ಯರುಗಳನ್ನು ಮಂಡಳಿಯ ಸದಸ್ಯತ್ವದಿಂದ ಕೈಬಿಟ್ಟಿದ್ದು, ನಿಯಮಾವಳಿಯ ಉಲ್ಲಂಘನೆಯಾಗಿರುತ್ತದೆ. ಈ ಕುರಿತಂತೆ ಸರ್ಕಾರದ ನಿಲುವಿನ ಕುರಿತು ಗಮನ ಸೆಳೆಯ ಬಯಸುತ್ತೇನೆ".

ಉತ್ತರ:

ಮಲೆನಾಡು ಪ್ರದೇಶ ಅಭಿವೃದ್ಧಿ ಮಂಡಳಿಯನ್ನು ಮಲೆನಾಡು ಪ್ರದೇಶ ಅಭಿವೃದ್ಧಿ ಮಂಡಳಿಯ ಅಧಿನಿಯಮ 1991 (ಕರ್ನಾಟಕ ಅಧಿನಿಯಮ 1991ರ ಸಂಖ್ಯೆ:36) ಹಾಗೂ ಮಲೆನಾಡು ಪ್ರದೇಶ ಅಭಿವೃದ್ಧಿ ಮಂಡಳಿಯ (ತಿದ್ದುಪಡಿ ಅಧಿನಿಯಮಗಳ ಸಂಖ್ಯೆ: 1993ರ 18 ಮತ್ತು 1994ರ 34), ಕಾರ್ಯ ರೂಪಿಸಲಾಗಿದ್ದು, ಅಧ್ಯಾಯ II ಪ್ರಕರಣ 3 (3) ರಲ್ಲಿ ಈ ಕೆಳಕಂಡಂತೆ ಸದಸ್ಯರಾಗಲು ಮಾನದಂಡಗಳನ್ನು ನಿಗಧಿಪಡಿಸಲಾಗಿದೆ.

ಎ) ಮಲೆನಾಡು ಪ್ರದೇಶವನ್ನು ಭಾಗಶಃ ಅಥವಾ ಪೂರ್ಣವಾಗಿ ಪ್ರತಿನಿಧಿಸುವ ಮಂಡಳಿಯ ಅಧಿಕಾರ ವ್ಯಾಪ್ತಿಯೊಳಗೆ ತಮ್ಮ ಚುನಾವಣಾ ಕ್ಷೇತ್ರಗಳನ್ನು ಹೊಂದಿರುವ ಸಂಸತ್ತಿನ ಮತ್ತು ರಾಜ್ಯ ವಿಧಾನ ಮಂಡಲದ ಸದಸ್ಯರು:

ಬಿ) ಮಲೆನಾಡು ಪ್ರದೇಶದ ಪರಿಧಿಯಲ್ಲಿ ಅಧಿಕಾರ ವ್ಯಾಪ್ತಿಯನ್ನು ಹೊಂದಿರುವ ಜಿಲ್ಲಾ ಪರಿಷತ್ತುಗಳ ಅಧ್ಯಕ್ಷರು:

ಸಿ) ರಾಜ್ಯ ಸರ್ಕಾರದಿಂದ ನಾಮ ನಿರ್ದೇಶಿತರಾದ ಹತ್ತು ಮಂದಿಯನ್ನು ಮೀರದ ಸದಸ್ಯರು, ಅವರ ಪೈಕಿ ಇಬ್ಬರು ಅನುಸೂಚಿತ ಜಾತಿಗಳು ಮತ್ತು ಒಬ್ಬರು ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ವ್ಯಕ್ತಿಗಳು ಸದಸ್ಯರಾಗಿರುತ್ತಾರೆ.

ಡಿ) ಮಂಡಳಿಯ ಕಾರ್ಯದರ್ಶಿ: ಮತ್ತು

ಇ) ಮಲೆನಾಡು ಪ್ರದೇಶದಲ್ಲಿರುವ ಪ್ರತಿಯೊಂದು ಜಿಲ್ಲೆಯ ಡೆಪ್ಯುಟಿ ಕಮಿಷನರವರು ಮಂಡಳಿಯ ಸದಸ್ಯರಾಗಿರುತ್ತಾರೆ.

ಕರ್ನಾಟಕ ವಿಧಾನ ಸಭೆಯಿಂದ ಆಯ್ಕೆಯಾಗಿರುವ/ನಾಮನಿರ್ದೇಶಿತ ವಿಧಾನ ಪರಿಷತ್ ಸದಸ್ಯರನ್ನು ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಯ ಸದಸ್ಯರೆಂದು ಪರಿಗಣಿಸಲು ಮಂಡಳಿಯ ಪ್ರಸ್ತುತ ಅಧಿನಿಯಮದಲ್ಲಿ ಅವಕಾಶವಿರುವುದಿಲ್ಲ. ಸದರಿ ಮಾನ್ಯ ವಿಧಾನ ಪರಿಷತ್ ಸದಸ್ಯರುಗಳನ್ನು ಮಂಡಳಿಯ ಸದಸ್ಯರೆಂದು ಪರಿಗಣಿಸಲು ಅಧಿನಿಯಮಕ್ಕೆ ತಿದ್ದುಪಡಿ ತರುವ ಸಂಬಂಧ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆಯೊಂದಿಗೆ ಸಮಾಲೋಚಿಸಲಾಗಿದೆ, ಕಡತ ಚಾಲನೆಯಲ್ಲಿದೆ. ಪ್ರಸ್ತುತ ಮಂಡಳಿಯಲ್ಲಿ ನಿಯಮಾವಳಿಗಳನ್ನು ಉಲ್ಲಂಘನೆ ಮಾಡಿರುವುದಿಲ್ಲ ಎಂದು ತಮ್ಮ ಗಮನಕ್ಕೆ ತರಬಯಸಲಾಗಿದೆ.

ಪಿಡಿಎಸ್ 8 ಎಂಡಿಬಿ 2021

(ಡಾ. ನಾರಾಯಣ ಗೌಡ)
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಸಚಿವರು.